# ನೇಮಕಾತಿ ಅಧಿಸೂಚನೆ

## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ

**ಅಧಿಸೂಚನೆ ಸಂಖ್ಯೆ: ಎಡಿಎಂ/15/2026, ರಾಮನಗರ, ದಿನಾಂಕ: 24.07.2026.**

**ವಿಷಯ:** ಬೆಂಗಳೂರು ದಕ್ಷಿಣ ಜಿಲ್ಲೆ ನ್ಯಾಯಾಂಗ ಘಟಕಕ್ಕೆ ಮಂಜೂರಾಗಿರುವ ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರು, ಆದೇಶ ಜಾರಿಕಾರರು ಮತ್ತು ಸೇವಕರ ಹುದ್ದೆಗಳಿಗೆ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುತ್ತಿರುವ ಬಗ್ಗೆ.

* * * * *

ಮೇಲ್ಕಂಡ ಅಧಿಸೂಚನೆಯನ್ವಯ ಬೆಂಗಳೂರು ದಕ್ಷಿಣ ಜಿಲ್ಲಾ ನ್ಯಾಯಾಲಯ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ ಬೆರಳಚ್ಚುಗಾರರು, ಬೆರಳಚ್ಚು-ನಕಲುಗಾರರು, ಆದೇಶ ಜಾರಿಕಾರರು ಮತ್ತು ಸೇವಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ.

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31 ನೇ ಆಗಸ್ಟ್ 2026.**

ಅರ್ಜಿಗಳನ್ನು ಬೆಂಗಳೂರು ದಕ್ಷಿಣ ಜಿಲ್ಲಾ ನ್ಯಾಯಾಲಯದ ವೈಬ್‌ಸೈಟ್
**https://ramanagara.dcourts.gov.in/online-recruitment/** ಮೂಲಕ ಆನ್‌ಲೈನ್ ನಲ್ಲಿ
ದಿನಾಂಕ: **30.07.2026** ರಿಂದ **31.08.2026** ರ ರಾತ್ರಿ **11.59**ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

## ಖಾಲಿ ಇರುವ ಹುದ್ದೆಗಳ ವಿವರಗಳು:

## I. ಬೆರಳಚ್ಚುಗಾರರು

1. ಹುದ್ದೆಗಳ ಸಂಖ್ಯೆ : 10
2. ವೇತನ ಶ್ರೇಣಿ :34100-800-35700-900-39300-1000-43300-1125-47800-1250-52800-1375-58300-1500-64300-1650-67600 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.
3. ಹುದ್ದೆಗಳ ವರ್ಗೀಕರಣ:

| ವರ್ಗೀಕರಣ | ಮಹಿಳೆ | ಗ್ರಾಮೀಣ | ಅಂಗವಿಕಲ | ಇತರೆ | ಒಟ್ಟು |
|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 02 | 02 | 01* | - | 05 |
| ಪರಿಶಿಷ್ಟ ಜಾತಿ | 01 | - | - | - | 01 |
| ಪರಿಶಿಷ್ಟ ಪಂಗಡ | - | - | - | 01 | 01 |
| ಪ್ರವರ್ಗ-**I** | - | - | - | 01 | 01 |
| ಪ್ರವರ್ಗ-**II A** | - | - | - | 01 | 01 |
| ಪ್ರವರ್ಗ-**II B** | - | - | - | 01 | 01 |
| ಒಟ್ಟು | **03** | **02** | **01** | **04** | **10** |

* ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿ

## II. ಬೆರಳಚ್ಚು-ನಕಲುಗಾರರು

1. ಹುದ್ದೆಗಳ ಸಂಖ್ಯೆ : 01

2. ವೇತನ ಶ್ರೇಣಿ : 34100-800-35700-900-39300-1000-43300-1125-47800-1250-52800-1375-58300-1500-64300-1650-67600 ಹಾಗೂ ಲಭ್ಯವಿರುವ ಇತರ ಭತ್ಯೆಗಳು.

3. ಹುದ್ದೆಗಳ ವರ್ಗೀಕರಣ:

| ವರ್ಗೀಕರಣ | ಇತರೆ | ಒಟ್ಟು |
|---|---|---|
| ಸಾಮಾನ್ಯ ಅಭ್ಯರ್ಥಿ | 01 | 01 |
| ಒಟ್ಟು | **01** | **01** |

## III. ಆದೇಶ ಜಾರಿಕಾರರು

1. ಹುದ್ದೆಗಳ ಸಂಖ್ಯೆ : 10
2. ವೇತನ ಶ್ರೇಣಿ :31775-725-32500-800-35700-900-39300-1000-43300-1125-47800-1250-52800-1375-58300-1500-61300 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

3. ಹುದ್ದೆಗಳ ವರ್ಗೀಕರಣಃ

| ವರ್ಗೀಕರಣ | ಮಹಿಳೆ | ಗ್ರಾಮೀಣ | ಅಂಗವಿಕಲ | ಇತರೆ | ಒಟ್ಟು |
|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 02 | 01 | 01* | 01 | 05 |
| ಪರಿಶಿಷ್ಟ ಜಾತಿ | 01 | - | - | 01 | 02 |
| ಪ್ರವರ್ಗ-**II A** | 01 | - | - | 01 | 02 |
| ಪ್ರವರ್ಗ-**II B** | - | - | - | 01 | 01 |
| ಒಟ್ಟು | **04** | **01** | **01** | **04** | **10** |

* ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿ

## IV. ಸೇವಕರುಃ

1. ಹುದ್ದೆಗಳ ಸಂಖ್ಯೆ : 30 (ಹೊಸ ಹುದ್ದೆಗಳು) + 04 (ಬ್ಯಾಕ್‌ಲಾಗ್)
2. ವೇತನ ಶ್ರೇಣಿ :27000-650-29600-725-32500-800-35700-900-39300-1000-43300-1125-46675 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು.

3. <u>ಹುದ್ದೆಗಳ ವರ್ಗೀಕರಣ:</u>

**ಹಿಂಬಾಕಿ ಹುದ್ದೆಗಳು: 04**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಕನ್ನಡ ಮಾಧ್ಯಮ | ಅಂಗವಿಕಲ | ಒಟ್ಟು |
|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 01 | - | - | - | 01 |
| ಪ್ರವರ್ಗ-II A | - | 01 | 01 | - | 02 |
| ಪ್ರವರ್ಗ-III B | - | - | - | 01* | 01 |
| ಒಟ್ಟು | **01** | **01** | **01** | **01** | **04** |

* ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿ

**ಹೊಸ ಹುದ್ದೆಗಳು: 30**

| ವರ್ಗೀಕರಣ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಅಂಗವಿಕಲ | ಇತರೆ | ಒಟ್ಟು |
|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 06 | 04 | 01 | 01 | 01* | 02 | 15 |
| ಪರಿಶಿಷ್ಟ ಜಾತಿ ಪ್ರವರ್ಗ - A | 01 | - | - | - | - | 01 | 02** |
| ಪರಿಶಿಷ್ಟ ಜಾತಿ ಪ್ರವರ್ಗ – B | 01 | - | - | - | - | 01 | 02** |
| ಪರಿಶಿಷ್ಟ ಜಾತಿ ಪ್ರವರ್ಗ - C | - | - | - | - | - | 01 | 01** |
| ಪರಿಶಿಷ್ಟ ಪಂಗಡ | - | - | - | - | - | 01 | 01 |
| ಪ್ರವರ್ಗ - I | - | - | - | - | - | 01 | 01 |
| ಪ್ರವರ್ಗ – II A | 01 | 01 | | | 01* | 01 | 04 |
| ಪ್ರವರ್ಗ – II B | - | - | - | - | - | 01 | 01 |
| ಪ್ರವರ್ಗ – III A | - | - | - | - | - | 01 | 01 |
| ಪ್ರವರ್ಗ – III B | 01 | - | - | - | - | 01 | 02 |
| ಒಟ್ಟು | **10** | **05** | **01** | **01** | **02** | **11** | **30** |

* ದೃಷ್ಟಿಮಾಂದ್ಯ / ದೃಷ್ಟಿದೋಷವುಳ್ಳ ಅಭ್ಯರ್ಥಿ

** ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2026, ದಿನಾಂಕ: 13.05.2026 ರ ಅನ್ವಯ ಪರಿಶಿಷ್ಟ ಜಾತಿಯ ಪ್ರವರ್ಗ - A, B ಮತ್ತು C ಗೆ ಪ್ರತ್ಯೇಕವಾಗಿ ಮೀಸಲಾತಿಯನ್ನು ಕಾಯ್ದಿರಿಸಿದೆ.

. . . 4

## ಶೈಕ್ಷಣಿಕ ವಿದ್ಯಾರ್ಹತೆ

### 1. ಬೆರಳಚ್ಚುಗಾರರ ಹುದ್ದೆ:

ಅ) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

ಆ) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಪ್ರೌಢದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

ಇ) ಕಛೇರಿ ಕಾರ್ಯ ಕಲಾಪಗಳಿಗೆ ಸಂಬಂಧಿಸಿದಂತೆ ಕಂಪ್ಯೂಟರ್ ಬಳಕೆ ಜ್ಞಾನ ಅವಶ್ಯಕವಾಗಿರುತ್ತದೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪ್ರೌಢ ದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

### 2. ಬೆರಳಚ್ಚು-ನಕಲುಗಾರರ ಹುದ್ದೆ:

ಅ) ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

ಆ) ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ಅಥವಾ ಕರ್ನಾಟಕ ಸೆಕೆಂಡರಿ ಪ್ರೌಢ ಶಿಕ್ಷಣ ಪರೀಕ್ಷೆಗಳ ಮಂಡಳಿ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಬೆರಳಚ್ಚು ಕಿರಿಯದರ್ಜೆ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣತೆ.

ಇ) ಕಛೇರಿ ಕಾರ್ಯ ಕಲಾಪಗಳಿಗೆ ಸಂಬಂಧಿಸಿದಂತೆ ಕಂಪ್ಯೂಟರ್ ಬಳಕೆ ಜ್ಞಾನ ಅವಶ್ಯಕವಾಗಿರುತ್ತದೆ.

**ಅಥವಾ**

ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಸೆಕ್ರೆಟೇರಿಯಲ್ ಪ್ರಾಕ್ಟೀಸ್ ಪಠ್ಯಕ್ರಮದ ಡಿಪ್ಲೋಮಾ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಕಿರಿಯ ದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು.

### 3. ಆದೇಶ ಜಾರಿಕಾರರು:

ಅ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

ಆ) ಡ್ರೈವಿಂಗ್ ಲೈಸೆನ್ಸ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

ಇ) ಅಭ್ಯರ್ಥಿಗೆ ಕನ್ನಡದಲ್ಲಿ ಓದಲು ಹಾಗೂ ಬರೆಯಲು ತಿಳಿದಿರಬೇಕು.

### 4. ಸೇವಕರು

ಅ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

ಬಿ) ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ತಿಳಿದಿರಬೇಕು.

. . . 5

## ವಯೋಮಿತಿ (ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಅನುಗುಣವಾಗಿ) :

**ಕನಿಷ್ಠ ವಯೋಮಿತಿ** :18 ವರ್ಷ

**ಗರಿಷ್ಠ ವಯೋಮಿತಿ** :ಸಾಮಾನ್ಯ ವರ್ಗ - 35 + 5* ವರ್ಷ

2ಎ, 2ಬಿ, 3ಎ, 3ಬಿ - 38 + 5* ವರ್ಷ

ಪ.ಜಾ, ಪ.ಪಂ, ಪ್ರವರ್ಗ-1 - 40 + 5* ವರ್ಷ

**ವಿ.ಸೂ:**1. ವಿಧವೆಯರಿಗೆ, ಮಾಜಿ ಸೈನಿಕರಿಗೆ, ಅಂಗವಿಕಲರಿಗೆ ಹಾಗೂ ಸರ್ಕಾರಿ ಸೇವೆಯಲ್ಲಿರುವವರಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು (ಈ ಬಗ್ಗೆ ಸಡಿಲಿಕೆ ಕೋರಿದಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು).

* 2. ದಿನಾಂಕ: 29.01.2026 ರ ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 262 ಸೇನೆನಿ 2025 ಬೆಂಗಳೂರು ಮತ್ತು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಪತ್ರ ಸಂಖ್ಯೆ: ಡಿಜೆಎ/400/2021, ದಿನಾಂಕ: 24.02.2026 ರ ಅನ್ವಯ ಎಲ್ಲಾ ಪ್ರವರ್ಗದ ಅಭ್ಯರ್ಥಿಗಳಿಗೆ ನಿಗದಿಪಡಿಸಿರುವ **ವಯೋಮಿತಿಯಲ್ಲಿ 5 ವರ್ಷ** ಸಡಿಲಿಕೆ ನೀಡಿದೆ.

## ಆಯ್ಕೆ ವಿಧಾನ:

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳು (ಮಿನಿಸ್ಟೀರಿಯಲ್ ಮತ್ತು ಇತರೆ ಹುದ್ದೆಗಳು ನೇಮಕಾತಿ) ನಿಯಮ 1982 ಮತ್ತು ಅಧೀನ ನ್ಯಾಯಾಲಯಗಳು (ಮಿನಿಸ್ಟೀರಿಯಲ್ ಮತ್ತು ಇತರೆ ಹುದ್ದೆಗಳು ನೇಮಕಾತಿ) (ತಿದ್ದುಪಡಿ) ನಿಯಮಗಳು 2007 ಮತ್ತು 2021ರ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

## 1. ಬೆರಳಚ್ಚುಗಾರರು

ಅ) 15 ನಿಮಿಷಗಳ ಉಕ್ತಲೇಖನವನ್ನು ಬೆರಳಚ್ಚುಪಡಿಸುವ ಅರ್ಹತಾ ಪರೀಕ್ಷೆಯನ್ನು ನಡೆಸಲಾಗುವುದು. (ಗರಿಷ್ಠ 100 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳನ್ನು ಪಡೆಯಬೇಕಾಗಿರುತ್ತದೆ)

ಆ) ಬೆರಳಚ್ಚುಗಾರರ ಹುದ್ದೆಗೆ 1:5 ಅನುಪಾತದಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಗೆ ಅನುಗುಣವಾಗಿ ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಯ್ಕೆ ಮಾಡಲಾಗುವುದು ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗುವುದು.

## 2. ಬೆರಳಚ್ಚು-ನಕಲುಗಾರರು

ಅ) 15 ನಿಮಿಷಗಳ ಉಕ್ತಲೇಖನವನ್ನು ಬೆರಳಚ್ಚುಪಡಿಸುವ ಅರ್ಹತಾ ಪರೀಕ್ಷೆಯನ್ನು ನಡೆಸಲಾಗುವುದು. (ಗರಿಷ್ಠ 100 ಅಂಕಗಳ ಪರೀಕ್ಷೆಯಲ್ಲಿ ಕನಿಷ್ಠ 50 ಅಂಕಗಳನ್ನು ಪಡೆಯಬೇಕಾಗಿರುತ್ತದೆ)

. . . 6

ಆ) ಬೆರಳಚ್ಚು-ನಕಲುಗಾರರ ಹುದ್ದೆಗೆ 1:5 ಅನುಪಾತದಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆಗೆ ಅನುಗುಣವಾಗಿ ಅತೀ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಆಯ್ಕೆ ಮಾಡಲಾಗುವುದು ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗುವುದು.

ಕರ್ನಾಟಕ ಅಧೀನ ನ್ಯಾಯಾಲಯಗಳು (ಮಿನಿಸ್ಟೀರಿಯಲ್ ಮತ್ತು ಇತರೆ ಹುದ್ದೆಗಳು (ನೇಮಕಾತಿ) (ತಿದ್ದುಪಡಿ) ನಿಯಮಗಳು 2007ರ ಅನ್ವಯ ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡಲಾಗುವುದು.

## 3. ಆದೇಶ ಜಾರಿಕಾರರು

ಅ) ಆದೇಶ ಜಾರಿಕಾರರ ಹುದ್ದೆಗೆ ಎಸ್.ಎಸ್.ಎಲ್.ಸಿ.ಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳಂತೆ (1:25ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿಃ** ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

ಆ) ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗೆ ಕನ್ನಡದಲ್ಲಿ ಓದುವ ಹಾಗೂ ಬರೆಯುವ ಬಗ್ಗೆ ಪ್ರವೀಣತೆ ಮತ್ತು ಸಾಮಾನ್ಯ ಜ್ಞಾನದ ತಿಳುವಳಿಕೆಯ ಬಗ್ಗೆ ಪರೀಕ್ಷಿಸಲಾಗುವುದು.

## 4. ಜವಾನರುಃ

ಅ) ಜವಾನರ ಹುದ್ದೆಗೆ ಎಸ್.ಎಸ್.ಎಲ್.ಸಿ.ಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 10 ಅಭ್ಯರ್ಥಿಗಳಂತೆ (1:10ರ ಅನುಪಾತದಲ್ಲಿ) ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿರುವ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಟಿಪ್ಪಣಿಃ** ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

## ಪರಿವೀಕ್ಷಣಾ ಅವಧಿಃ

ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು 1977ರ ಪ್ರಕಾರ 2 ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

## ಪಿಂಚಣಿ ಸೌಲಭ್ಯ

ಸರ್ಕಾರದ ಆದೇಶ ಸಂಖ್ಯೆಃ ಎಫ್.ಡಿ (ಎಸ್.ಪಿ.ಎಲ್)/04/ಪಿಇಟಿ/05, ದಿನಾಂಕಃ 31.03.2006ರಂತೆ ಅನ್ವಯಿಸುವುದು.

. . . 7

## ನಿಗದಿತ ಅರ್ಜಿ ಶುಲ್ಕ - ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ :

| | |
|---|---|
| ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | ₹ 200/- |
| ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ | ₹ 100/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ ವಿನಾಯಿತಿ ಇರುತ್ತದೆ. | |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://ramanagara.dcourts.gov.in/online-recruitment/ ನಲ್ಲಿ ನೀಡಲಾದ ಲಿಂಕ್ ಮುಖಾಂತರ online payment through SBI e-pay mode/ Net-Banking / Credit Card / Debit Card / UPI ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಚಲನ್, ಡಿಮಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್ /ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು, ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

**ಅಭ್ಯರ್ಥಿಗಳು ON-LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

1. ಅಭ್ಯರ್ಥಿಗಳು ಅರ್ಜಿಯನ್ನು ON-LINE ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ತಮಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.
3. ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.
   ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು, ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ)ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 25kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

**4.** ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು download ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರು ಪಡಿಸತಕ್ಕದ್ದು.

**5.** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

**6.** ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ https://ramanagara.dcourts.gov.in/online-recruitment/ ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ಸಲ್ಲಿಸಲು ದಿನಾಂಕಃ **31.08.2026** ರ ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ.

ಮತ್ತು

ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸಲು ದಿನಾಂಕಃ **01.09.2026** ರ ರಾತ್ರಿ **11.59** ಕಡೆಯ ದಿನಾಂಕ ಆಗಿರುತ್ತದೆ.

**7.** ಅರ್ಹ ಅಭ್ಯರ್ಥಿಗಳಿಗೆ SMS ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

**8.** ಅಭ್ಯರ್ಥಿಗಳು ತಮ್ಮ ಅರ್ಜಿಯ ಜೊತೆ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದುಃ-

ಅ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ಬಗ್ಗೆ ರಶೀತಿ.

ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳು.

ಇ)ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2ರಲ್ಲಿ (ಮೀಸಲಾತಿ ಕೋರಿದ್ದಲ್ಲಿ).

ಈ)ಮಾಜಿ ಸೈನಿಕ ಅಭ್ಯರ್ಥಿಗಳು ಹುದ್ದೆಗೆ ಅರ್ಜಿ ಸಲ್ಲಿಸಲು ಹಾಗೂ ವಯೋಮಿತಿ ರಿಯಾಯಿತಿ ಕೋರಲು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.

. . . 9

ಉ)ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರ ಹಾಗೂ ಶಾಲಾ ನಡತೆ ಪ್ರಮಾಣ ಪತ್ರಗಳು.

ಊ) ನಿರಾಕ್ಷೇಪಣಾ ಪತ್ರ (ಸರಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ).

**9.** ಗ್ರಾಮೀಣ, ಅಂಗವಿಕಲ, ಕನ್ನಡ ಮಾಧ್ಯಮ, ಮಾಜಿ ಸೈನಿಕ ಅಭ್ಯರ್ಥಿಗಳ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಪ್ರವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಕೆನೆಪದರ ಪ್ರಮಾಣ ಪತ್ರವನ್ನು **(Creamy Layer Certificate)** ಸಲ್ಲಿಸತ್ಕದ್ದು.

**10.** ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

**11.** ಅಭ್ಯರ್ಥಿಯು ಆದೇಶ ಜಾರಿಕಾರರು ಅಥವಾ ಸೇವಕರ ಹುದ್ದೆಗೆ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಕರ್ನಾಟಕ ಪ್ರೌಢಶಿಕ್ಷಣ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ., ಪರೀಕ್ಷೆಯ ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿಯನ್ನು ಸ್ಕ್ಯಾನ್ ಮಾಡಿ ಪಿಡಿಎಫ್ ನಮೂನೆಯಲ್ಲಿ ತಪ್ಪದೇ ಅಪ್ಲೋಡ್ ಮಾಡತಕ್ಕದ್ದು ಹಾಗೂ ಅಪ್ಲೋಡ್ ಮಾಡಿದ ಪ್ರತಿಯು ಸ್ಪಷ್ಟವಾಗಿರತಕ್ಕದ್ದು.

**12.** ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**13.** ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸುರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದು ಪಡಿಸಲಾಗುವುದು.

**14.** ಅನುಲಿಪಿ ಅರ್ಹತಾ ಪರೀಕ್ಷೆಯನ್ನು ಮಾನ್ಯ ಉಚ್ಛ ನ್ಯಾಯಾಲಯದ ತಂತ್ರಾಂಶದ ಮೂಲಕ ಕಂಪ್ಯೂಟರಿನಲ್ಲಿ ನಡೆಸಲಾಗುವುದು ಮತ್ತು ಕನ್ನಡ ಅನುಲಿಪಿ ಅರ್ಹತಾ ಪರೀಕ್ಷೆಯನ್ನು ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ನೀಡಲಾಗಿರುವ ಕನ್ನಡ ಕೀ ಬೋರ್ಡ್ ಲೇ ಔಟ್ ಪ್ರಕಾರ ನಡೆಸಲಾಗುವುದು.

**. . . 10**

**15.** ಅಭ್ಯರ್ಥಿಗಳು ತಮ್ಮ ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ ಸಿಜಿಪಿಎ ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗದಿತ ಕಾಲಂನಲ್ಲಿ ನಮೂದಿಸಬೇಕು.

**(ಮಂಜಪ್ಪ ಹನಮಂತಪ್ಪ ಅಣ್ಣಯ್ಯನವರ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಬೆಂಗಳೂರು ದಕ್ಷಿಣ ಜಿಲ್ಲೆ,
ರಾಮನಗರ.
Prl. District and Sessions Judge, Ramanagara.

<u>ನಕಲು ಪ್ರತಿಯನ್ನು :-</u>

ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಮಾಹಿತಿಗಾಗಿ ಮುಖಪತ್ರದೊಂದಿಗೆ ಸಲ್ಲಿಸಲಾಗಿದೆ.

**<u>ಈ ಅಧಿಸೂಚನೆಯನ್ನು ತಮ್ಮ ಕಛೇರಿ ಸೂಚನಾ ಫಲಕದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲು ಕೋರಿ ಈ ಕೆಳಗಿನವರಿಗೆ ರವಾನಿಸಿದೆ.</u>**

1. ಪ್ರಧಾನ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ್, ಬಿಜಾಪುರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ ಮಂಗಳೂರು, ದಾವಣಗೆರೆ, ಧಾರವಾಡ, ಗದಗ, ಕಲಬುರಗಿ, ಹಾವೇರಿ, ಕೊಡಗು (ಮಡಿಕೇರಿ), ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ಶಿವಮೊಗ್ಗ, ತುಮಕೂರು, ಉಡುಪಿ, ಉತ್ತರ ಕನ್ನಡ ಕಾರವಾರ, ಹಾಸನ, ಕೋಲಾರ, ಯಾದಗಿರಿ, ವಿಜಯನಗರ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.
2. 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಮನಗರ, ಕನಕಪುರದಲ್ಲಿ.
3. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ., ರಾಮನಗರ.
4. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನಪಟ್ಟಣ.
5. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಕನಕಪುರ.
6. ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಮಾಗಡಿ.
7. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,ರಾಮನಗರ/ಚನ್ನಪಟ್ಟಣ/ಕನಕಪುರ/ಮಾಗಡಿ.
8. ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ-ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ. (ದ್ವಿಪ್ರತಿಯಲ್ಲಿ)
9. ಆಯುಕ್ತರು, ವಾರ್ತಾ ಇಲಾಖೆ, ನಂ.17, ಭಗವಾನ್ ಮಹಾವೀರ್ (ಇನ್‌ಫ್ಯಾಂಟ್ರಿ) ಜೈನ್ ರಸ್ತೆ, ಬೆಂಗಳೂರು-560001 ಇವರಿಗೆ-ರಾಜ್ಯದ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ. (ದ್ವಿಪ್ರತಿಯಲ್ಲಿ)
10. ಉಪ ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ರಾಮನಗರ ಇವರಿಗೆ-ಜಿಲ್ಲೆಯ ಸ್ಥಳೀಯ ದಿನಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರಕ್ಕಾಗಿ ಪ್ರಕಟಿಸಲು ಕೋರಿ.

. . . 11

11. ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಹೆಚ್.35, ಪಿಡಬ್ಲ್ಯೂ ಡಿ ಗೆಸ್ಟ್ ಹೌಸ್, ರಾಮನಗರ.

12. ಸಾಫ್ಟ್ ವೇರ್ ಟೆಕ್ನೀಷಿಯನ್, ಕಂಪ್ಯೂಟರ್ ವಿಭಾಗ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ ಇವರಿಗೆ ಬೆಂಗಳೂರು ದಕ್ಷಿಣ ಜಿಲ್ಲಾ ನ್ಯಾಯಾಲಯದ ಜಾಲತಾಣದಲ್ಲಿ ಪ್ರಕಟಣೆಗಾಗಿ ಹಾಗೂ ಕ್ರಮ ಸಂಖ್ಯೆ: 1 ರಿಂದ 7ರವರೆಗಿನ ನ್ಯಾಯಾಲಯಗಳಿಗೆ/ಕಛೇರಿಗೆ ಇ-ಮೇಲ್ ಮೂಲಕ ಕಳುಹಿಸುವ ಸಲುವಾಗಿ.

13. ಕಛೇರಿಯ ಸೂಚನಾ ಫಲಕಕ್ಕೆ.

14. ಕಛೇರಿಯ ನಕಲು.

15. ಹೆಚ್ಚಿನ ಪ್ರತಿ.